# Akashvani : Bangalore
# National Bulletin In Kannada
# 02.06.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.06.2024 / 7.35 am**

**<><*<><>*><>**

ಮುಖ್ಯಾಂಶಗಳು

**೧. ೨೦೨೪ ಲೋಕಸಭಾ ಚುನಾವಣೆಯ ಎಲ್ಲ ಹಂತಗಳ ಮತದಾನ ಪೂರ್ಣ; ಏಳನೇ ಹಂತದಲ್ಲಿ ಶೇಕಡ ೬೨.೩೬ ರಷ್ಟು ಮತ ಚಲಾವಣೆ**

**೨. ನ್ಯಾಯಸಮ್ಮತ ಹಾಗೂ ಶಾಂತಿಯುತ ಚುನಾವಣೆ ನಡೆಸಿದ್ದಕ್ಕಾಗಿ ಭಾರತೀಯ ಚುನಾವಣಾ ಆಯೋಗವನ್ನು ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ**

**೩. ಕಳೆದ ಮೇ ತಿಂಗಳಲ್ಲಿ ೧ ಲಕ್ಷದ ೭೩ ಸಾವಿರ ಕೋಟಿ ರೂಪಾಯಿ ಜಿಎಸ್‌ಟಿ ಸಂಗ್ರಹ; ಕಳೆದ ವರ್ಷಕ್ಕಿಂತ ಶೇಕಡ ೧೦ ರಷ್ಟು ವೃದ್ಧಿ -ಹಣಕಾಸು ಸಚಿವಾಲಯ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಅಭ್ಯಾಸ ಪಂದ್ಯದಲ್ಲಿ ಬಾಂಗ್ಲಾದೇಶದ ವಿರುದ್ಧ ಭಾರತಕ್ಕೆ ೬೦ ರನ್ ಜಯ**

**<><*<><>*><>**

**೨೦೨೪ರ ಲೋಕಸಭಾ ಚುನಾವಣೆಯ ಮತದಾನ ನಿನ್ನೆ ಪೂರ್ಣಗೊಂಡಿದೆ. ಏಳನೇ ಹಾಗೂ ಅಂತಿಮ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡಿಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಿತು. ಈ ಹಂತದಲ್ಲಿ ಒಟ್ಟಾರೆ ಶೇಕಡ ೬೨.೩೬ ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಶೇಕಡ ೫೧.೯೨, ಚಂಡೀಗಢದಲ್ಲಿ ೬೭.೯೦, ಹಿಮಾಚಲಪ್ರದೇಶದಲ್ಲಿ ೭೦.೦೫, ಜಾರ್ಖಂಡ್‌ನಲ್ಲಿ ೭೦.೬೬, ಒಡಿಶಾದಲ್ಲಿ ೭೦.೬೭, ಪಂಜಾಬ್‌ನಲ್ಲಿ ೬೧.೩೨, ಉತ್ತರ ಪ್ರದೇಶದಲ್ಲಿ ೫೫.೫೯ ಹಾಗೂ ಪಶ್ಚಿಮಬಂಗಾಳದಲ್ಲಿ ಶೇಕಡ ೭೩.೭೯ ರಷ್ಟು ಮತದಾನವಾಗಿರುವ ಕುರಿತು ವರದಿಯಾಗಿದೆ. ಈ ಹಂತದಲ್ಲಿ ಉತ್ತರ ಪ್ರದೇಶ ಮತ್ತು ಪಂಜಾಬ್‌ನಲ್ಲಿ ತಲಾ ೧೩, ಪಶ್ಚಿಮ ಬಂಗಾಳದಲ್ಲಿ ೯, ಬಿಹಾರದಲ್ಲಿ ೮, ಒಡಿಶಾದಲ್ಲಿ ೬, ಹಿಮಾಚಲ ಪ್ರದೇಶದಲ್ಲಿ ೪, ಜಾರ್ಖಂಡ್‌ನಲ್ಲಿ ೩ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ೧ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಿತು. ೯೦೪ ಅಭ್ಯರ್ಥಿಗಳು ಈ ಹಂತದಲ್ಲಿ**

ಸ್ಪರ್ಧಿಸಿದ್ದಾರೆ. ಒಡಿಶಾದ ೪೨ ವಿಧಾನಸಭಾ ಕ್ಷೇತ್ರಗಳಿಗೂ ನಿನ್ನೆ ಮತದಾನ ನಡೆಯಿತು. ಈ ಹಂತದಲ್ಲಿ ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ, ಸ್ಪರ್ಧಿಸಿರುವ ವಾರಾಣಸಿಯಲ್ಲೂ ಮತ ನಡೆಯಿತು. ಬಿಜೆಪಿ ನಾಯಕರಾದ ಅನುರಾಗ್ ಸಿಂಗ್ ಠಾಕೂರ್, ರವಿಶಂಕರ್ ಪ್ರಸಾದ್, ಕಾಂಗ್ರೆಸ್ ನಾಯಕರಾದ ಮನೀಷ್ ತಿವಾರಿ, ವಿಕ್ರಮಾಧಿತ್ಯ ಸಿಂಗ್, ಆರ್‌ಜೆಡಿ ನಾಯಕಿ ಮಿಸಾ ಭಾರತಿ, ತೃಣಮೂಲ ಕಾಂಗ್ರೆಸ್ ಮುಖಂಡ ಅಭಿಷೇಕ್ ಬ್ಯಾನರ್ಜಿ ಈ ಹಂತದಲ್ಲಿ ಕಣದಲ್ಲಿದ್ದರು. ಮತದಾನಪೂರ್ಣಗೊಂಡ ಬಳಿಕ ಹೇಳಿಕೆ ಬಿಡುಗಡೆಗೊಳಿಸಿರುವ ಚುನಾವಣಾ ಆಯೋಗ, ದೇಶದಾದ್ಯಂತ ಏಳು ಹಂತಗಳಲ್ಲಿ ಸುಗಮವಾಗಿ ಮತ್ತು ಶಾಂತಿಯುತವಾಗಿ ಮತದಾನ ನಡೆದಿದೆ. ಮುಖ್ಯ ಚುನಾವಣಾ ಆಯುಕ್ತರಾದ ರಾಜೀವ್ ಕುಮಾರ್ ನೇತೃತ್ವದಲ್ಲಿ ಹಾಗೂ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಡಾ. ಸುಖಬೀರ್ ಸಿಂಗ್ ಸಂಧು ಅವರೊಂದಿಗೆ ಚುನಾವಣಾ ಪ್ರಕ್ರಿಯೆಯ ಪ್ರತಿಯೊಂದು ಅಂಶದ ಮೇಲೆ ನಿಗಾ ಇರಿಸಲಾಗಿತ್ತು ಎಂದಿದೆ. ಮತದಾರರು ನಿರ್ಭೀತಿಯಿಂದ ಮತ ಚಲಾಯಿಸಲು ಅನುಕೂಲಕರ ವಾತಾವರಣವನ್ನು ಸೃಷ್ಟಿಸಲು ಕಟ್ಟುನಿಟ್ಟಾದ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು ಎಂದು ಆಯೋಗ ತಿಳಿಸಿದೆ. ಎಲ್ಲಾ ಹಂತಗಳ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ ಕಾರ್ಯ ನಾಡಿದ್ದು ಅಂದರೆ ಇದೇ ೪ ರಂದು ನಡೆಯಲಿದೆ.

**<><*<><>*><>**

೨೦೨೪ರ ಲೋಕಸಭಾ ಚುನಾವಣೆಯನ್ನು ನ್ಯಾಯಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಿದ್ದಕ್ಕಾಗಿ ಭಾರತೀಯ ಚುನಾವಣಾ ಆಯೋಗವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತದ ಪ್ರಜಾಪ್ರಭುತ್ವದ ಸಮಗ್ರತೆಯನ್ನು ಎತ್ತಿಹಿಡಿಯುವಲ್ಲಿ ಆಯೋಗ ರೂಪಿಸಿರುವ ಯೋಜನೆ ಮತ್ತು ಅದರ ಸಮರ್ಪಣಾಭಾವ ನಿರ್ಣಾಯಕವಾಗಿದ್ದು, ದೇಶಾದ್ಯಂತ ನಾಗರಿಕರು ವಿಶ್ವಾಸ ಮತ್ತು ಭದ್ರತೆಯೊಂದಿಗೆ ಮತ ಚಲಾಯಿಸಲು ಅನುವು ಮಾಡಿಕೊಟ್ಟಿದೆ. ಚುನಾವಣೆಯ ಸಂದರ್ಭದಲ್ಲಿ ಜಾಗರೂಕತೆಯಿಂದ ನಿಗಾ ವಹಿಸಿದ್ದಕ್ಕಾಗಿ ದೇಶದ ಅತ್ಯುತ್ತಮ ಭದ್ರತಾ ಪಡೆಗಳಿಗೆ ಪ್ರಧಾನಮಂತ್ರಿ ಕೃತಜ್ಞತೆ ಸಲ್ಲಿಸಿದ್ದಾರೆ. ಅವರ ಪ್ರಯತ್ನಗಳು ಸುರಕ್ಷಿತ ಮತ್ತು ಸುರಕ್ಷಿತ ವಾತಾವರಣವನ್ನು ಖಾತ್ರಿಪಡಿಸಿದೆ, ಜನರು ಸುಲಭವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಸಾಧ್ಯವಾಗಿದೆ ಎಂದು ಹೇಳಿದ್ದಾರೆ.

**<><*<><>*><>**

೨೦೨೪ರ ಲೋಕಸಭಾ ಚುನಾವಣೆಯನ್ನು ನ್ಯಾಯಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಿದ್ದಕ್ಕಾಗಿ ಭಾರತೀಯ ಚುನಾವಣಾ ಆಯೋಗವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತದ ಪ್ರಜಾಪ್ರಭುತ್ವದ ಸಮಗ್ರತೆಯನ್ನು ಎತ್ತಿಹಿಡಿಯುವಲ್ಲಿ ಆಯೋಗ ರೂಪಿಸಿರುವ ಯೋಜನೆ ಮತ್ತು ಅದರ ಸಮರ್ಪಣಾಭಾವ ನಿರ್ಣಾಯಕವಾಗಿದ್ದು, ದೇಶಾದ್ಯಂತ ನಾಗರಿಕರು ವಿಶ್ವಾಸ ಮತ್ತು ಭದ್ರತೆಯೊಂದಿಗೆ ಮತ ಚಲಾಯಿಸಲು ಅನುವು ಮಾಡಿಕೊಟ್ಟಿದೆ. ಚುನಾವಣೆಯ ಸಂದರ್ಭದಲ್ಲಿ ಜಾಗರೂಕತೆಯಿಂದ ನಿಗಾ ವಹಿಸಿದ್ದಕ್ಕಾಗಿ ದೇಶದ ಅತ್ಯುತ್ತಮ ಭದ್ರತಾ ಪಡೆಗಳಿಗೆ ಪ್ರಧಾನಮಂತ್ರಿ ಕೃತಜ್ಞತೆ ಸಲ್ಲಿಸಿದ್ದಾರೆ. ಅವರ ಪ್ರಯತ್ನಗಳು ಸುರಕ್ಷಿತ ಮತ್ತು ಸುರಕ್ಷಿತ ವಾತಾವರಣವನ್ನು ಖಾತ್ರಿಪಡಿಸಿದೆ, ಜನರು ಸುಲಭವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಸಾಧ್ಯವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಎನ್‌ಡಿಎ ಸರ್ಕಾರವನ್ನು ಮತ್ತೆ ಅಧಿಕಾರಕ್ಕೆ ತರಲು ಜನರು ದಾಖಲೆ ಸಂಖ್ಯೆಯಲ್ಲಿ ಮತ ಚಲಾಯಿಸಿರುವ ಬಗ್ಗೆ ವಿಶ್ವಾಸವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಪೋಸ್ಟ್‌ನಲ್ಲಿ ಅವರು, ಎನ್‌ಡಿಎ ಸರ್ಕಾರದ ಕಾರ್ಯಗಳನ್ನು ಜನರು ನೋಡಿದ್ದು, ಸರ್ಕಾರದ ಕಾರ್ಯವು ಬಡವರು, ದುರ್ಬಲರು, ಮತ್ತು ದೀನದಲಿತರ ಜೀವನದಲ್ಲಿ ಗುಣಾತ್ಮಕ ಬದಲಾವಣೆಯನ್ನು ತಂದಿದೆ ಎಂದು ಹೇಳಿದ್ದಾರೆ. ಸರ್ಕಾರ ಜಾರಿಗೆ ತಂದ ಸುಧಾರಣೆಗಳು ಭಾರತವನ್ನು ವಿಶ್ವದ ಐದನೇ ಪ್ರಬಲ ಆರ್ಥಿಕತೆಯಾಗಿ ಹೇಗೆ ಮುನ್ನಡೆಸಿದೆ ಎಂಬುದನ್ನು ಜನರು ಗಮನಿಸಿದ್ದಾರೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><*<><>*><>

ಕಳೆದ ಮೇ ತಿಂಗಳಲ್ಲಿ ಸರಕು ಮತ್ತು ಸೇವಾ ತೆರಿಗೆ ಸಂಗ್ರಹ ೧ ಲಕ್ಷದ ೭೩ ಸಾವಿರ ಕೋಟಿ ರೂಪಾಯಿ ತಲುಪಿದೆ. ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಈ ಕರಿತು ಹೇಳಿಕೆ ಬಿಡುಗಡೆಗೊಳಿಸಿರುವ ಸಚಿವಾಲಯ, ಕಳೆದ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ ಜಿಎಸ್‌ಟಿ ಸಂಗ್ರಹದಲ್ಲಿ ಶೇಕಡ ೧೦ ರಷ್ಟು ವೃದ್ಧಿಯಾಗಿದೆ. ಒಟ್ಟಾರೆ ತೆರಿಗೆ ಸಂಗ್ರಹದಲ್ಲಿ ಕೇಂದ್ರ ಸರಕು ಮತ್ತು ಸೇವಾ ತೆರಿಗೆ ೩೨ ಸಾವಿರ ಕೋಟಿ ರೂಪಾಯಿಗೂ ಅಧಿಕ ಸಂಗ್ರಹವಾಗಿದೆ. ರಾಜ್ಯ ಸರಕು ಮತ್ತು ಸೇವಾ ತೆರಿಗೆ ಸಂಗ್ರಹ ೪೦ ಸಾವಿರ ಕೋಟಿ ರೂಪಾಯಿ ದಾಟಿದೆ. ಮರು ಪಾವತಿಗಳ ಲೆಕ್ಕಾಚಾರಗಳ ಬಳಿಕ ನಿವ್ವಳ ಜಿಎಸ್‌ಟಿ ಆದಾಯ ಕಳೆದ ತಿಂಗಳಲ್ಲಿ ೧ ಲಕ್ಷ ೪೪ ಸಾವಿರ ಕೋಟಿ

ರೂಪಾಯಿ ಇದ್ದು, ಕಳೆದ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ ಇದು ಶೇಕಡ ೬.೯ ರಷ್ಟು ಬೆಳವಣಿಗೆ ಸೂಚಿಸಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ದೇಶದ ಹಲವು ಪ್ರದೇಶಗಳಲ್ಲಿ ಮುಂದುವರೆದಿರುವ ಬಿಸಿಗಾಳಿ ವಾತಾವರಣದಿಂದಾಗಿ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಹವಾಮಾನ ವೈಪರೀತ್ಯದಿಂದ ಸಂಭವಿಸಿದ ಸಾವುಗಳ ಬಗ್ಗೆ ಅವರು ದುಃಖ ವ್ಯಕ್ತಪಡಿಸಿದ್ದಾರೆ. ಸ್ಥಳೀಯ ಆಡಳಿತಗಳು ತುರ್ತು ಪರಿಸ್ಥಿತಿಗಳಿಗೆ ತ್ವರಿತವಾಗಿ ಸ್ಪಂದಿಸಿದ್ದು, ಶಾಖಾಘಾತದಿಂದ ಸಂತ್ರಸ್ತರಾದವರಿಗೆ ಸಹಾಯ ಮಾಡಲು ಸೂಕ್ತ ಕ್ರಮಗಳನ್ನು ತೆಗೆದುಕೊಂಡಿರುವ ಬಗ್ಗೆ ಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿಸಿಗಾಳಿ ಪರಿಸ್ಥಿತಿಯನ್ನು ಎದುರಿಸಲು ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕೆಗಳ ಬಗ್ಗೆ ಅರಿವು ಮೂಡಿಸುವ ಮತ್ತು ದೀರ್ಘಾವಧಿಯಲ್ಲಿ ಹವಾಮಾನ ಬಿಕ್ಕಟ್ಟಿನ ಮೂಲ ಕಾರಣಗಳನ್ನು ಪರಿಹರಿಸುವ ಪ್ರಾಮುಖ್ಯತೆಯನ್ನು ಅವರು ಒತ್ತಿ ಹೇಳಿದರು. ತಮ್ಮ ಮತ್ತೊಂದು ಪೋಸ್ಟ್‌ನಲ್ಲಿ ಅವರು, ರೆಮಲ್ ಚಂಡಮಾರುತವು ಪಶ್ಚಿಮ ಬಂಗಾಳ, ಅಸ್ಸಾಂ, ಈಶಾನ್ಯ ಭಾಗಗಳು ಮತ್ತು ತೆಲಂಗಾಣದಲ್ಲಿ ಭಾರಿ ಹಾನಿ ಉಂಟುಮಾಡಿದೆ ಎಂದು ರಾಷ್ಟ್ರಪತಿ ಹೇಳಿದ್ದಾರೆ. ಜೀವ ಮತ್ತು ಆಸ್ತಿ ನಷ್ಟ ಹಾಗೂ ಸಾರ್ವಜನಿಕರ ಸ್ಥಳಾಂತರದ ವರದಿಗಳು ದುಃಖಕರವಾಗಿದೆ. ಈ ನೈಸರ್ಗಿಕ ವಿಕೋಪದಿಂದ ಸಂತ್ರಸ್ತರಾದವರ ಜೊತೆ ದೇಶ ನಿಂತಿದೆ ಎಂದಿರುವ ಅವರು, ಪರಿಹಾರ ಪ್ರಯತ್ನಗಳು ಯಶಸ್ವಿಯಾಗಿ, ಪರಿಸ್ಥಿತಿ ಬೇಗನೆ ಸಹಜ ಸ್ಥಿತಿಗೆ ಮರಳಲಿ ಎಂದು ಪ್ರಾರ್ಥಿಸಿದ್ದಾರೆ.

<><*<><>*><>

ಚುನಾವಣೋತ್ತರ ಹಿಂಸಾಚಾರವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮತ ಎಣಿಕೆ ದಿನದ ನಂತರ ಚುನಾವಣಾ ಆಯೋಗ, ವಿವಿಧ ರಾಜ್ಯಗಳಲ್ಲಿ ಕೇಂದ್ರೀಯ ಪಡೆಗಳನ್ನು ನಿಯೋಜಿಸಲಿದೆ. ರಾಜ್ಯ ಹಾಗೂ ಕೇಂದ್ರ ವೀಕ್ಷಕರು ನೀಡಿದ ವರದಿಗಳಿಗೆ ಅನುಗುಣವಾಗಿ ಆಯೋಗ ಪಡೆಗಳನ್ನು ನಿಯೋಜಿಸಲಿದ್ದು, ಆಂಧ್ರಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ಎಣಿಕೆ ದಿನದ ನಂತರ ೧೫ ದಿನಗಳವರೆಗೆ ಪಡೆಗಳು ನಿಗಾವಹಿಸಲಿವೆ. ಹಾಗೆಯೇ ಉತ್ತರಪ್ರದೇಶ, ಒಡಿಶಾ, ಸಿಕ್ಕಿಂ, ಅರುಣಾಚಲ ಪ್ರದೇಶಗಳಲ್ಲಿ ಎಣಿಕೆ ಬಳಿಕ ಎರಡು ದಿನಗಳವರೆಗೆ ಕೇಂದ್ರೀಯ ಪಡೆಗಳನ್ನು ನಿಯೋಜಿಸಲು ನಿರ್ಧರಿಸಲಾಗಿದೆ.

<><*<><>*><>

ಲೋಕಸಭಾ ಚುನಾವಣೆಯ ಮತ ಎಣಿಕೆಗೂ ಮುನ್ನ ಪ್ರತಿಪಕ್ಷಗಳ ಒಕ್ಕೂಟ, ಐಎನ್‌ಡಿಐಎ ದೆಹಲಿಯಲ್ಲಿ ನಿನ್ನೆ ಸಭೆ ನಡೆಸಿ ೨೯೫ ಕ್ಕೂ ಹೆಚ್ಚು ಕ್ಷೇತ್ರಗಳನ್ನು ವಿಶ್ವಾಸವನ್ನು ವ್ಯಕ್ತಪಡಿಸಿದೆ. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಚುನಾವಣೆಗಳು ಮತ್ತು ಮುಂಬರುವ ಸಂಭಾವ್ಯ ಸವಾಲುಗಳ ಸೇರಿದಂತೆ ಅನೇಕ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಅಲ್ಲದೆ, ಮತ ಎಣಿಕೆ ದಿನ ಪ್ರತಿಪಕ್ಷಗಳು ಅನುಸರಿಸಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆಯೂ ಚರ್ಚಿಸಲಾಯಿತು. ಇಂದು ಮಾಧ್ಯಮಗಳಲ್ಲಿ ಪ್ರಸಾರವಾಗುವ ಮತಗಟ್ಟೆ ಸಮೀಕ್ಷಾ ಚರ್ಚೆಗಳಲ್ಲಿ ಪಾಲ್ಗೊಳ್ಳಲು ಪ್ರತಿಪಕ್ಷಗಳು ತೀರ್ಮಾನಿಸಿವೆ ಎಂದು ಹೇಳಿದರು. ಇದಕ್ಕೂ ಮುನ್ನ ಮತಗಟ್ಟೆ ಸಮೀಕ್ಷೆಗಳ ಚರ್ಚೆಗಳನ್ನು ಬಹಿಷ್ಕರಿಸಲು ಕಾಂಗ್ರೆಸ್ ತೀರ್ಮಾನಿಸಿತ್ತು. ಆಮ್ ಆದ್ಮಿ ಪಕ್ಷದ ಸಂಚಾಲಕ ಹಾಗೂ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಸಭೆಯ ನಂತರ ಮಾತನಾಡಿ, ಕೇಂದ್ರದಲ್ಲಿ ಬಲಿಷ್ಠ ಸರ್ಕಾರ ರಚಿಸುವತ್ತ ಐಎನ್‌ಡಿಐಎ ಒಕ್ಕೂಟ ಮುಂದೆ ಸಾಗುತ್ತಿದೆ ಎಂದರು. ಸಮಾಜವಾದಿ ಪಕ್ಷದ ವರಿಷ್ಠ ಅಖಿಲೇಶ್ ಯಾದವ್ ಮಾತನಾಡಿ, ಉತ್ತರ ಪ್ರದೇಶದಲ್ಲಿ ಐಎನ್‌ಡಿಐಎ ಒಕ್ಕೂಟ ಬಹುತೇಕ ಸ್ಥಾನಗಳನ್ನು ಗೆಲ್ಲಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಐಎನ್‌ಡಿಐಎ ಒಕ್ಕೂಟ ಜಯ ಸಾಧಿಸುವ ವಿಶ್ವಾಸವನ್ನು ಸಿಪಿಎಂ ಪ್ರಧಾನ ಕಾರ್ಯದರ್ಶಿ ಸೀತಾರಾಮ್ ಯಚೂರಿ ವ್ಯಕ್ತಪಡಿಸಿದರು. ಸಭೆಯಲ್ಲಿ ಕಾಂಗ್ರೆಸ್‌ನ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರ, ಕೆ.ಸಿ.ವೇಣುಗೋಪಾಲ್, ಆಮ್ ಪಕ್ಷದ ನಾಯಕ ಹಾಗೂ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ಜಾರ್ಖಂಡ್ ಮುಖ್ಯಮಂತ್ರಿ ಚಂಪೈ ಸೊರೆನ್, ಎನ್‌ಸಿಪಿ ಶರದ್ ಪವಾರ್, ನ್ಯಾಷನಲ್ ಕಾನ್ಫರೆನ್ಸ್‌ನ ಫಾರುಕ್ ಅಬ್ದುಲ್ಲಾ, ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಸಿಪಿಐನ ಡಿ.ರಾಜ, ಡಿಎಂಕೆಯ ಟಿ.ಆರ್.ಬಾಲು, ಪಾಲ್ಗೊಂಡಿದ್ದರು.

<><*<><>*><>

ಲಂಡನ್‌ನಲ್ಲಿ ನಡೆಯುತ್ತಿರುವ ಎಫ್‌ಐಎಚ್ ಹಾಕಿ ಪ್ರೊ ಲೀಗ್‌ನ ಮೊದಲ ಪಂದ್ಯದಲ್ಲಿ ಭಾರತ ಮಹಿಳಾ ಹಾಕಿ ತಂಡ, ಜರ್ಮನಿ ವಿರುದ್ಧ ೧-೩ ಅಂತರದಿಂದ ಪರಾಭವಗೊಂಡಿದೆ. ಭಾರತೀಯ ಮಹಿಳಾ ಹಾಕಿ ತಂಡ ಇಂದು ಬ್ರಿಟನ್ ತಂಡದ ವಿರುದ್ಧ ಸೆಣಸಲಿದೆ.

<><*<><>*><>

ನ್ಯೂಯಾರ್ಕ್‌ನ ನಸ್ಸೌದ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ೨೦೨೪ ರ ಅಭ್ಯಾಸ ಪಂದ್ಯದಲ್ಲಿ ಭಾರತ ತಂಡ ಬಾಂಗ್ಲಾದೇಶದ ವಿರುದ್ಧ ೬೦ ರನ್‌ಗಳ ಜಯ ದಾಖಲಿಸಿದೆ.ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಭಾರತ,

ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್‌ಗೆ ೧೮೨ ರನ್ ಗಳಿಸಿತು. ಭಾರತದ ಪರ ರಿಷಬ್ ಪಂತ್ ೩೨ ಎಸೆತಗಳಲ್ಲಿ ೫೩ ಮತ್ತು ಹಾರ್ದಿಕ್ ಪಾಂಡ್ಯ ಅಜೇಯ ೪೦ ರನ್‌ಗಳು ತಂಡ ಮೊತ್ತ ಹಿಗ್ಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿತು.

ಬಾಂಗ್ಲಾದೇಶ ಪರ ಮಾಜಿ ನಾಯಕ ಮಹಮ್ಮದುಲ್ಲಾ ೨೯ ಎಸೆತಗಳಲ್ಲಿ ೪೦ ರನ್ ಗಳಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ <>*><>**